6292
25 2015

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2015–16ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾದಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹೆಚ್ಚುವರಿ ಸಹಾಯಧನ ನೀಡುವ ಕುರಿತು.

ಓದಲಾಗಿದೆ: 1) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ಕೈಅ/ಇ1/2015–16, ದಿನಾಂಕ: 05.05.2015.

2) ಕೈಗಾರಿಕಾ ನೀತಿ 2014–19 ಜಾರಿಗೆ ತಂದಿರುವ ಸರ್ಕಾರಿ ಆದೇಶ ಸಂಖ್ಯೆ: ಸಿಐ 58 ಎಸ್‌ಪಿಐ 2014, ದಿನಾಂಕ: 01.10.2014.

* * * * *

**ಪ್ರಸ್ತಾವನೆ:**

2015–16ನೇ ಸಾಲಿನ ಆಯವ್ಯಯದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಹೊಸ ಕೈಗಾರಿಕಾ ನೀತಿಯನ್ವಯ ಹಲವು ಯೋಜನೆಗಳನ್ನು ಘೋಷಿಸಲಾಗಿದ್ದು, ಅವುಗಳಲ್ಲಿ ಕಂಡಿಕೆ-412 (ಸಿ) ಈ ಕೆಳಕಂಡಂತಿರುತ್ತದೆ.

*"ಪರಿಶಿಷ್ಟ ಜಾತಿ / ಪಂಗಡದ ಉದ್ಯಮಶೀಲರಿಗೆ ಬಂಡವಾಳ ಹೂಡಿಕೆ ಸಹಾಯಧನದ ಜೊತೆ ಹೆಚ್ಚುವರಿಯಾಗಿ ರೂ. 15 ರಿಂದ 35 ಲಕ್ಷದವರೆಗೆ ಸಹಾಯಧನವನ್ನು ನೀಡಲಾಗುವುದು".*

ಅದರಂತೆ ಹಾಗೂ ಮೇಲೆ ಓದಲಾದ (2)ರ ಕೈಗಾರಿಕಾ ನೀತಿ 2014–19ರಲ್ಲಿ ಅವಕಾಶ ಕಲ್ಪಿಸಿರುವಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ದಿಮೆದಾರರಿಗೆ ಈ ಕೆಳಕಂಡಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ / ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ರಿಯಾಯಿತಿ ದರದಲ್ಲಿ ಭೂಮಿ / ಶೆಡ್ ಹಂಚಿಕೆ ಮಾಡುವಂತೆ ಓದಲಾದ (1)ರ ಪತ್ರದಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಮತ್ತು ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಕೋರಿರುತ್ತಾರೆ.

27/7
AS(A)

| | |
|---|---|
| ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿ ಇನ್ನುಳಿದ ಪ್ರದೇಶ: | |
| ವಲಯ 1 ಮತ್ತು 2 | ಶೇ. 40 – ಗರಿಷ್ಠ ಮಿತಿ ರೂ. 15 ಲಕ್ಷಗಳು |
| ವಲಯ 3 | ಶೇ. 30 – ಗರಿಷ್ಠ ಮಿತಿ ರೂ. 25 ಲಕ್ಷಗಳು |
| ವಲಯ 4 | ಶೇ. 25 – ಗರಿಷ್ಠ ಮಿತಿ ರೂ. 35 ಲಕ್ಷಗಳು |
| ಆ) ಹೈದ್ರಾಬಾದ್-ಕರ್ನಾಟಕ ಪ್ರದೇಶ: | |
| ವಲಯ 1 | ಶೇ. 40 – ಗರಿಷ್ಠ ಮಿತಿ ರೂ. 25 ಲಕ್ಷಗಳು |
| ವಲಯ 2 | ಶೇ. 40 – ಗರಿಷ್ಠ ಮಿತಿ ರೂ. 20 ಲಕ್ಷಗಳು |

ಈ ಕಾರ್ಯಕ್ರಮಕ್ಕೆ ಅನುದಾನವನ್ನು ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆ ಅಡಿಯಲ್ಲಿ ರೂಪಿಸಲಾಗಿರುವ ಮಾರ್ಗಸೂಚಿಗಳನ್ವಯ ಭರಿಸಲಾಗುವುದು.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 147 ಎಸ್‌ಪಿಸಿ 2015, ಬೆಂಗಳೂರು, ದಿನಾಂಕ: 22.07.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪರಿಶಿಷ್ಟ ಜಾತಿ / ಪಂಗಡದ ಉದ್ಯಮಶೀಲರಿಗೆ ಬಂಡವಾಳ ಹೂಡಿಕೆ ಸಹಾಯಧನದ ಜೊತೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ.) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ.) ಸಂಸ್ಥೆಗಳಿಂದ ಹಂಚಿಕೆ ಮಾಡಲಾಗುವ ಭೂಮಿ / ಮಳಿಗೆಗಳ ಮೇಲೆ ಈ ಕೆಳಕಂಡಂತೆ ರಿಯಾಯಿತಿಯನ್ನು ನೀಡಲು ಅನುಮೋದನೆ ನೀಡಲಾಗಿದೆ.

| | |
|---|---|
| ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿ ಇನ್ನುಳಿದ ಪ್ರದೇಶ: | |
| ವಲಯ 1 ಮತ್ತು 2 | ಶೇ. 40 – ಗರಿಷ್ಠ ಮಿತಿ ರೂ. 15 ಲಕ್ಷಗಳು |
| ವಲಯ 3 | ಶೇ. 30 – ಗರಿಷ್ಠ ಮಿತಿ ರೂ. 25 ಲಕ್ಷಗಳು |
| ವಲಯ 4 | ಶೇ. 25 – ಗರಿಷ್ಠ ಮಿತಿ ರೂ. 35 ಲಕ್ಷಗಳು |
| ಆ) ಹೈದ್ರಾಬಾದ್-ಕರ್ನಾಟಕ ಪ್ರದೇಶ: | |
| ವಲಯ 1 | ಶೇ. 40 – ಗರಿಷ್ಠ ಮಿತಿ ರೂ. 25 ಲಕ್ಷಗಳು |
| ವಲಯ 2 | ಶೇ. 40 – ಗರಿಷ್ಠ ಮಿತಿ ರೂ. 20 ಲಕ್ಷಗಳು |

ಈ ರಿಯಾಯಿತಿಯ ಮರು ಪಾವತಿ ಮತ್ತು ರಿಯಾಯಿತಿ ದರ ನಿಗಧಿಪಡಿಸಲು ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯ ಮಾರ್ಗಸೂಚಿಯನ್ನು ಪಾಲಿಸತಕ್ಕದ್ದು ಮತ್ತು ಪ್ರತಿ ಸಾಲಿನಲ್ಲಿ ಈ ಕಾರ್ಯಕ್ರಮವನ್ನು ಅನುಮೋದಿತ ಆಯವ್ಯಯದ ಹಂಚಿಕೆಯ ಮಿತಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 48 ಎಫ್‌ಆರ್‌ಓ 2015, ದಿನಾಂಕ: 17.06.2015 ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 673 ವೆಚ್ಚ-01 2015, ದಿನಾಂಕ: 08.07.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

22.07.2015

(ಆರ್.ಎಸ್. ಶ್ರೀಕಂಠಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
3) ಪ್ರಧಾನ ಮಹಾಲೇಖಪಾಲರು (ಎ &ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4) ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು. (2015–16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ: 412)
5) ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
7) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯ ನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ [KIADB], ರಾಷ್ಟ್ರೋತ್ಥಾನ ಪರಿಷತ್ ಭವನ, ನೃಪತುಂಗ ರಸ್ತೆ, ಬೆಂಗಳೂರು-1.
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು-10.

9) ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

10) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.

11) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು-1.

12) ಹಿರಿಯ ನಿರ್ದೇಶಕರು (ಪಿಐಫ್‌ಆರ್)— ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

13) ಸರ್ಕಾರದ ಅಧೀನ ಕಾರ್ಯದರ್ಶಿ [ಸಮನ್ವಯ], ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1 (ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)

14) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಡಾ. ಬಿ. ಆರ್. ಅಂಬೇಡ್ಕರ್ ರ
ಬೆಂಗಳೂರು –560001. ದೂ. 22034319

ಸಂಖ್ಯೆ: ಸಿಐ 147 ಸಿಎಸ್‌ಸಿ 2015

ದಿನಾಂಕ: 08.10.2015.

## ಸೇರ್ಪಡೆ ಆದೇಶ

2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪರಿಶಿಷ್ಟ ಜಾತಿ / ಪಂಗಡದ ಉದ್ಯಮಶೀಲರಿಗೆ ಬಂಡವಾಳ ಹೂಡಿಕೆ ಸಹಾಯಧನದ ಜೊತೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ.) ಸಂಸ್ಥೆಗಳಿಂದ ಹಂಚಿಕೆ ಮಾಡಲಾಗುವ ಭೂಮಿ / ಮಳಿಗೆಗಳ ಮೇಲೆ ರಿಯಾಯಿತಿಯನ್ನು ನೀಡಲು ಸರ್ಕಾರಿ ಆದೇಶ ಸಂಖ್ಯೆ: ಸಿಐ 147 ಸಪ್ರಕೈ 2015, ದಿನಾಂಕ: 22.07.2015ರ ಆದೇಶದಲ್ಲಿ ಅನುಮೋದನೆ ನೀಡಲಾಗಿದ್ದು, ಆದೇಶದ ಮೊದಲನೇ ಕಂಡಿಕೆಯಲ್ಲಿ ಐದನೇ ಸಾಲಿನ "ಈ ಕೆಳಕಂಡಂತೆ ರಿಯಾಯಿತಿಯನ್ನು ನೀಡಲು ಅನುಮೋದನೆ ನೀಡಲಾಗಿದೆ" ಎಂಬುದನ್ನು **"ಈ ಕೆಳಕಂಡಂತೆ ರಿಯಾಯಿತಿಯನ್ನು ದಿನಾಂಕ: 01.10.2014 ರಿಂದ ಅನ್ವಯವಾಗುವಂತೆ ನೀಡಲು ಅನುಮೋದನೆ ನೀಡಲಾಗಿದೆ"** ಎಂದು ಮಾರ್ಪಡಿಸಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
08.10.2015
(ಆರ್.ಎಸ್. ಶ್ರೀಕಂಠಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.**

**ಪ್ರತಿಯನ್ನು:**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
3) ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4) ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು. (2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ: 412)
5) ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.

7) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯ ನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ [KIADB], ರಾಷ್ಟ್ರೋತ್ಥಾನ ಪರಿಷತ್ ಭವನ, ನೃಪತುಂಗ ರಸ್ತೆ, ಬೆಂಗಳೂರು-1.
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು-10.
9) ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ ವಿಧಾನ ಸೌಧ, ಬೆಂಗಳೂರು.
10) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು-1.
12) ಹಿರಿಯ ನಿರ್ದೇಶಕರು (ಪಿಎಫ್‌ಆರ್), ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13) ಸರ್ಕಾರದ ಅಧೀನ ಕಾರ್ಯದರ್ಶಿ [ಸಮನ್ವಯ], ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1 (ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)
14) ಕಾರ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ / ಪಂಗಡದ ಉದ್ದಿಮೆದಾರರ ಹಾಗೂ ಕೈಗಾರಿಕೋದ್ಯಮಿಗಳ ಸಂಘ, ನಂ.12, ನಾರ್ಥ್ ಪಾರ್ಕ್ ರಸ್ತೆ, ಶೇಷಾದ್ರಿಪುರಂ ಪೋಸ್ಟ್ ಆಫೀಸ್, ಶೇಷಾದ್ರಿಪುರಂ, ಬೆಂಗಳೂರು-560020.
15) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.